# Akashvani : Bangalore
# Regional Bulletin In Kannada
# 14.03.2026 / 18.40 hrs

## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಮಂಡ್ಯದಲ್ಲಿ ಶೀಘ್ರ ೧ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಎಲೆಕ್ಟ್ರಿಕ್ ವಾಹನಗಳ ಪರೀಕ್ಷಾ ಕೇಂದ್ರ ಸ್ಥಾಪನೆ - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ

೨. ಉತ್ತರಕರ್ನಾಟಕದ ಪ್ರಾದೇಶಿಕ ಅಸಮಾನತೆ ನಿವಾರಿಸಲು ಸರ್ಕಾರ ಬದ್ಧ - ಮುಖ್ಯಮಂತ್ರಿ ಸಿದ್ದರಾಮಯ್ಯ

೩. ಹುಬ್ಬಳ್ಳಿ-ಅಂಕೋಲಾ ರೈಲು ಮಾರ್ಗದ ಕಾಮಗಾರಿಗೆ ಶೀಘ್ರದಲ್ಲೇ ಅನುಮೋದನೆ - ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ

೪. ಕೃಷ್ಣ ಮೇಲ್ದಂಡೆ ಯೋಜನೆ ; ರಾಜ್ಯದ ಸಂಸದರೊಂದಿಗೆ ದೆಹಲಿಯಲ್ಲಿ ಸಭೆ-ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್

೫. ವಾರದೊಳಗೆ ಸಹಜ ಸ್ಥಿತಿಗೆ ಅಡುಗೆ ಅನಿಲ ಸಿಲೆಂಡರ್ ಪೂರೈಕೆ: ಆಹಾರ ಸಚಿವ ಕೆ.ಹೆಚ್.ಮುನಿಯಪ್ಪ ವಿಶ್ವಾಸ

**<><*<><>*><>**

ಪ್ರಸ್ತುತ ದೇಶದಲ್ಲಿ ಎಲೆಕ್ಟ್ರಿಕ್ ವಾಹನಗಳಿಗೆ ಹೆಚ್ಚಿನ ಬೇಡಿಕೆ ಇದ್ದು, ಈ ವಾಹನಗಳ ಟೆಸ್ಟಿಂಗ್‌ಗಾಗಿ ದೂರದ ಪುಣೆ, ಮುಂಬೈಗೆ ಹೋಗಬೇಕಿದೆ. ನಮ್ಮ ರಾಜ್ಯದಲ್ಲಿ ಈ ಟೆಸ್ಟಿಂಗ್ ಸೆಂಟರ್ ಅವಶ್ಯಕತೆ ಇದ್ದು; ಮಂಡ್ಯದಲ್ಲಿ ಸ್ಥಾಪಿಸಲು ಕ್ರಮವಹಿಸಲಾಗಿದೆ ಎಂದು ಕೇಂದ್ರದ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯ ತಾಲ್ಲೂಕಿನ ವಿ.ಸಿ.ಫಾರಂನಲ್ಲಿ ನೂತನ ಕ್ರೀಡಾಂಗಣ ಕಾಮಗಾರಿಗೆ ಚಾಲನೆ ನೀಡಿದ ಬಳಿಕ ಮಾತನಾಡಿದ ಅವರು, ಎಲೆಕ್ಟ್ರಾನಿಕ್ ವಾಹನಗಳ ಟೆಸ್ಟಿಂಗ್ ಯೋಜನೆಯನ್ನು ಮಂಡ್ಯಕ್ಕೆ ತರುವ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಅವರೊಂದಿಗೆ ಚರ್ಚಿಸಿದ್ದು, ಶೀಘ್ರದಲ್ಲೇ ಒಂದು ಸಾವಿರ ಕೋಟಿ ವೆಚ್ಚದಲ್ಲಿ ಸ್ಥಾಪಿಸಲಾಗುವುದು ಎಂದು ಹೇಳಿದರು. ಮಂಡ್ಯ ಮತ್ತು ಅಕ್ಕಪಕ್ಕದ ಜಿಲ್ಲೆಗಳ ಯುಕರಿಗೆ ಉದ್ಯೋಗ ನೀಡುವ ದೃಷ್ಟಿಯಿಂದ ಅಟೋ ಮೊಬೈಲ್ ಇಂಡಸ್ಟ್ರಿ ಶೀಘ್ರದಲ್ಲೇ ಮಂಡ್ಯಕ್ಕೆ ಬರಲಿದೆ. ಸುಮಾರು ೨೦೦ರಿಂದ ೩೦೦ ಕೋಟಿ ರೂಪಾಯಿ ವೆಚ್ಚದ ಸ್ಟಾರ್ಟ್‌ಅಪ್ ಕಂಪನಿಯ ಮೂಲಕ ಕೈಗಾರಿಕಾ ಕಾರ್ಖಾನೆ ತರಲಾಗುತ್ತಿದ್ದು, ಪರಿಸರಕ್ಕೆ ಹಾನಿಯಾಗದಂತೆ ಈ ಯೋಜನೆ ಕಾರ್ಯಗತವಾಗಲಿದೆ ಎಂದರು. ಕೈಗಾರಿಕೆಗೆ ಮಂಡ್ಯ ಜಿಲ್ಲೆಯಲ್ಲಿ ನೂರು ಎಕರೆ ಜಾಗಬೇಕಿದೆ. ರಾಜ್ಯ ಸರ್ಕಾರ ಬಜೆಟ್‌ನಲ್ಲಿ ಕೊಡುತ್ತೇವೆ ಎಂದಿದ್ದು, ಜಿಲ್ಲಾಡಳಿತ ಸರ್ಕಾರದ ಸೂಚನೆಯಂತೆ ಜಾಗ ಗುರುತಿಸಲಿ ಎಂದು ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

**<><*<><>*><>**

ಬಾಗಲಕೋಟೆ ವೈದ್ಯಕೀಯ ಕಾಲೇಜು ದಿವಂಗತ ಶಾಸಕ ಎಚ್.ವೈ. ಮೇಟಿ ಅವರ ಕನಸಿನ ಕೂಸು ಎಂದು ಹೇಳಿದರು. ಆ ಕನಸನ್ನು ನನಸು ಮಾಡುವ ಕೆಲಸವನ್ನು ಸರ್ಕಾರ ಕೈಗೊಂಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ನವನಗರದಲ್ಲಿ ಬಾಗಲಕೋಟೆ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನಾ ಸಂಸ್ಥೆಯ ಶಂಕುಸ್ಥಾಪನೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಈ ಯೋಜನೆ ಉಪಚುನಾವಣೆಯನ್ನು ಗಮನದಲ್ಲಿಟ್ಟುಕೊಂಡು ತರಾತುರಿಯಲ್ಲಿ ಶಂಕುಸ್ಥಾಪನೆ ಮಾಡಲಾಗಿದೆ ಎಂಬ ಆರೋಪವನ್ನು ತಳ್ಳಿಹಾಕಿದರು. ಬಾಗಲಕೋಟೆ ವೈದ್ಯಕೀಯ ಕಾಲೇಜು ೨೦೨೫ರ ಬಜೆಟ್‌ನಲ್ಲಿ ಘೋಷಣೆಯಾದ ಯೋಜನೆ. ಕೆಲವು ಕಾರಣಗಳಿಂದ ವಿಳಂಬವಾಗಿ ಇದೀಗ ಶಂಕುಸ್ಥಾಪನೆ ನಡೆಯುತ್ತಿದೆ. ಇದಕ್ಕೂ ಬಾಗಲಕೋಟೆ ಉಪಚುನಾವಣೆಗೆ ಯಾವುದೇ ಸಂಬಂಧ ಇಲ್ಲ ಎಂದು ಇದೇ ವೇಳೆ ಅವರು ಸ್ಪಷ್ಟಪಡಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸುವುದರ ಜೊತೆಗೆ ಅಭಿವೃದ್ಧಿ ಕಾರ್ಯಕ್ರಮಗಳನ್ನೂ ಸಮರ್ಪಕವಾಗಿ ನಡೆಸುತ್ತಿದೆ. ಗ್ಯಾರಂಟಿಗಳಿಂದ ಅಭಿವೃದ್ಧಿಗೆ ಅಡ್ಡಿಯಾಗಿದೆ ಎನ್ನುವುದು ಸತ್ಯಕ್ಕೆ ದೂರವಾದ ಮಾತು ಎಂದು ಮುಖ್ಯಮಂತ್ರಿ ಹೇಳಿದರು.

<><*<><>*><>

ಅಮೆರಿಕ, ಇಸ್ರೇಲ್, ಇರಾನ್ ಯದ್ಧದಿಂದ ಉಂಟಾದ ಜಾಗತಿಕ ಸಮಸ್ಯೆಯನ್ನು ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ಸಮರ್ಥವಾಗಿ ನಿಭಾಯಿಸಿರುವುದರಿಂದ ದೇಶದಲ್ಲಿ ಪೆಟ್ರೋಲ್ ಡೀಸೆಲ್ ಸಾಕಷ್ಟು ಲಭ್ಯವಿದೆ. ಆದರೆ, ವಿಪಕ್ಷಗಳು ವ್ಯರ್ಥ ಆರೋಪ ಮಾಡುತ್ತಿವೆ ಎಂದು ಸಂಸದ ಬಸವರಾಜ ಬೊಮ್ಮಾಯಿ ಟೀಕಿಸಿದ್ದಾರೆ.  ಗದಗನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇಶದಲ್ಲಿ ಗೃಹ ಬಳಕೆಯ ಎಲ್‌ಪಿಜಿ ಸಿಲಿಂಡರ್‌ಗೆ ಯಾವುದೇ ಸಮಸ್ಯೆ ಇಲ್ಲ, ಕರ್ನಾಟಕದಲ್ಲೂ ಸಮಸ್ಯೆ ಇರದು; ಈ ಬಗ್ಗೆ ಸ್ವತಃ ರಾಜ್ಯದ ಆಹಾರ ಸಚಿವ ಕೆ.ಎಚ್ ಮುನಿಯಪ್ಪನವರೇ ಹೇಳಿದ್ದಾರೆ. ವಾಣಿಜ್ಯ ಸೆಲಿಂಡರ್‌ಗಳಿಗೆ ಸ್ವಲ್ಪ ಸಮಸ್ಯೆಯಾಗಿದೆ. ಈ ಬಗ್ಗೆ ಆತಂಕಕ್ಕೊಳಕ್ಕೆ ಒಳಗಾಗುವುದು ಬೇಡ ಎಂದರು.  ಭಾರತ, ಎಲ್‌ಪಿಜಿ ಗ್ಯಾಸ್‌ಗೆ ಗಲ್ಫ್ ದೇಶಗಳನ್ನು ಅವಲಂಬಿಸಬೇಕಿದೆ. ಯುದ್ಧದ ವಾತಾವರಣ ಇರುವುದರಿಂದ ಅಲ್ಲಿಂದ ಗ್ಯಾಸ್ ತರಬೇಕಿದೆ. ಪ್ರಧಾನಿ ನರೇಂದ್ರ ಮೋದಿಯವರ ಮುತ್ಸದ್ದಿತನದಿಂದ ಮತ್ತು ಭಾರತ ಸರ್ಕಾರದ ರಾಜತಾಂತ್ರಿಕ ನೈಪುಣ್ಯತೆಯಿಂದಾಗಿ ಇರಾನ್ ಈಗಾಗಲೇ ಪೆಟ್ರೋಲ್ ಡೀಸೆಲ್ ತೈಲ ಸಾಗಾಟಕ್ಕೆ ಅನುಮತಿ ನೀಡಿದೆ. ಗ್ಯಾಸ್ ಕೂಡ ಈಗಾಗಲೇ ಬರುತ್ತಿದೆ.  ಇದೆಲ್ಲವೂ ಕಾಂಗ್ರೆಸಿಗೂ ಗೊತ್ತಿದ್ದು, ಆದರೂ, ವ್ಯರ್ಥ ಆರೋಪ ಮಾಡುವುದು ಸರಿಯಲ್ಲ ಎಂದು ಹೇಳಿದರು.

<><*<><>*><>

ಧಾರವಾಡ-ಬೆಳಗಾವಿ ಮಧ್ಯೆ ರೈಲ್ವೆ ಮಾರ್ಗದ ಯೋಜನೆ ಕಾಮಗಾರಿಗೆ ರಾಜ್ಯ ಸರ್ಕಾರ ಭೂಸ್ವಾಧೀನಕ್ಕೆ ಸಹಕಾರ ನೀಡುತ್ತಿಲ್ಲ. ಇದರಿಂದ ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುತ್ತಿದ್ದು, ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆ ಹಾಗೂ ಹುಬ್ಬಳ್ಳಿ ಪದಾಧಿಕಾರಿಗಳು ಸರ್ಕಾರದ ಮೇಲೆ ಒತ್ತಡ ಹಾಕಬೇಕು ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದ್ದಾರೆ. ಟೈ ಹುಬ್ಬಳ್ಳಿ ವತಿಯಿಂದ ಏರ್ಪಡಿಸಿದ್ದ ಟೈಕಾನ್-೨೦೨೬ ಉತ್ತರ ಕರ್ನಾಟಕ ರೈಸಿಂಗ್ ಸಮಾವೇಶಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹುಬ್ಬಳ್ಳಿಯ ಗಾಮನಗಟ್ಟಿ ಕೈಗಾರಿಕಾ ಪ್ರದೇಶದಲ್ಲಿ ಎ-ಎಂಸಿಜಿ ಕ್ಲಸ್ಟರ್‌ಗೆ ಸ್ಥಾಪನೆಯಾಗಿದ್ದು, ರಾಜ್ಯ ಸರ್ಕಾರ ಭೂಮಿ ದರ ಹೆಚ್ಚಿಸಿದೆ. ಇದರಿಂದ ಕೈಗಾರಿಕೋದ್ಯಮಿಗಳು ಮುಂದೆ ಬರುತ್ತಿಲ್ಲ. ಈ ಬಗ್ಗೆ ಸಂಸ್ಥೆಗಳು ಸರ್ಕಾರದ ಗಮನಕ್ಕೆ ತರಬೇಕು ಎಂದರು. ಹುಬ್ಬಳ್ಳಿ-ಅಂಕೋಲ ರೈಲು ಮಾರ್ಗದ ಕಾಮಗಾರಿಗೆ ಶೀಘ್ರದಲ್ಲಿಯೇ ಅನುಮೋದನೆ ದೊರೆಯಲಿದೆ. ಇದರಿಂದ ಉತ್ತರ ಕರ್ನಾಟಕ ಭಾಗದ ಕೈಗಾರಿಕೋದ್ಯಮಿಗಳಿಗೆ ಬಹಳಷ್ಟು ಸಹಕಾರವಾಗಲಿದೆ. ಇದು ಬಂದರುಗಳಿಗೆ ಸಂಪರ್ಕದ ಕೊಂಡಿಯಾಗಲಿದ್ದು, ಅಭಿವೃದ್ಧಿಗೆ ಅನುಕೂಲವಾಗಲಿದೆ ಎಂದು ತಿಳಿಸಿದರು.

<><*<><>*><>

ರಾಜ್ಯದ ಕೃಷ್ಣಾ ಮೇಲ್ದಂಡೆ ಯೋಜನೆಯ ೩ನೇ ಹಂತಕ್ಕೆ ತಕರಾರು ಎತ್ತಿರುವ ಹಾಗೂ ತುಂಗಭದ್ರಾ ಅಣೆಕಟ್ಟಿನ ನೀರು ಪೋಲು ತಡೆಯಲು ಸಹಕಾರ ನೀಡದಿರುವ ಆಂಧ್ರ ಪ್ರದೇಶದ ನಡೆ ವಿರುದ್ಧ ಧ್ವನಿ ಎತ್ತಬೇಕಿದ್ದು; ಈ ಬಗ್ಗೆ ಕೇಂದ್ರ ಸರ್ಕಾರದ ಮೇಲೆ ಒತ್ತಡ ಹೇರುವ ಹಿನ್ನೆಲೆಯಲ್ಲಿ ರಾಜ್ಯದ ಸಂಸದರೊಂದಿಗೆ ದೆಹಲಿಯ ಕರ್ನಾಟಕ ಭವನದಲ್ಲಿ ಇದೇ ೧೭ರಂದು ಸಭೆ ನಡೆಸಲಾಗುವುದು ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ಬಾಗಲಕೋಟೆಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕೃಷ್ಣಾ ಮೇಲ್ದಂಡೆ ಯೋಜನೆ ಅನುಷ್ಠಾನ ಹಾಗೂ ಭೂಸ್ವಾಧೀನ ಪ್ರಕ್ರಿಯೆ ಮಾಡಬಾರದೆಂದು ಆಂಧ್ರ ಪ್ರದೇಶದವರು ಕೇಂದ್ರ ಸರ್ಕಾರಕ್ಕೆ ಆಕ್ಷೇಪಣಾ ಪತ್ರ ಬರೆದಿದ್ದು, ಈ ವಿಚಾರವಾಗಿ ಕೇಂದ್ರ ಸರ್ಕಾರ ನಮಗೆ ಪತ್ರ ಬರೆದು ಸ್ಪಷ್ಟನೆ ಕೇಳಿದೆ. ನ್ಯಾಯಾಧೀಕರಣ ಆದೇಶದ ಪ್ರಕಾರ ನಮ್ಮ ಪಾಲಿನ ನೀರಿನ ಬಳಕೆಗೆ ಯೋಜನೆ ಮಾಡುತ್ತಿದ್ದು, ಈಗಾಗಲೇ ೨೬ ಸಾವಿರ ಕೋಟಿ ರೂಪಾಯಿ ಮೊತ್ತದ ಕಾಮಗಾರಿಗಳನ್ನು ಆರಂಭಿಸಿದ್ದೇವೆ ಎಂದರು.  ಕರ್ನಾಟಕ ಈಗ ಆಲಮಟ್ಟಿ ಅಣೆಕಟ್ಟು ಎತ್ತರ ಹೆಚ್ಚಳ ಮಾಡುತ್ತಿಲ್ಲ. ೨೦೧೦ ರಲ್ಲಿ ಆಗಿರುವ ಆದೇಶದ ಅನುಸಾರ ನಮ್ಮ ಪಾಲಿನ ನೀರು ಬಳಕೆಗೆ ಸಿದ್ಧತೆ ಮಾಡಿಕೊಳ್ಳುತ್ತಿದ್ದೇವೆ ಅಷ್ಟೇ. ಇದಕ್ಕೆ ಆಂಧ್ರ ಪ್ರದೇಶ ಸರ್ಕಾರ ತಗಾದೆ ತೆಗೆದಿದೆ. ಇದರ ಜತೆಗೆ, ತುಂಗಭದ್ರಾ ಅಣೆಕಟ್ಟೆಯಿಂದ ನಮಗೆ ೩೦ ಟಿಎಂಸಿ ನೀರು ವ್ಯರ್ಥವಾಗುತ್ತಿದ್ದು, ಇದಕ್ಕೆ ಪರ್ಯಾಯ ಮಾರ್ಗ ಕಂಡುಕೊಳ್ಳಲು ಆಂಧ್ರ ಸರಕಾರ ನಮಗೆ ಸಹಕಾರ ನೀಡುತ್ತಿಲ್ಲ. ಈ ಎಲ್ಲಾ ವಿಚಾರಗಳ ಬಗ್ಗೆ ದೆಹಲಿಯಲ್ಲಿ ನಮ್ಮ ಸಂಸದರ ಜತೆ ಚರ್ಚೆ ಮಾಡಲಾಗುವುದು ಎಂದು ತಿಳಿಸಿದರು.

<><*<><>*><>

ಕೊಲ್ಲಿ ದೇಶಗಳಲ್ಲಿ ಯುದ್ಧದ ಪರಿಸ್ಥಿತಿ ಹಿನ್ನೆಲೆಯಲ್ಲಿ ಉಂಟಾದ ಗೃಹಬಳಕೆ ಹಾಗೂ ವಾಣಿಜ್ಯ ಬಳಕೆ ಅಡುಗೆ ಅನಿಲ ಸಿಲಿಂಡರ್‌ಗಳ ಪೂರೈಕೆ ಸಮಸ್ಯೆಯು ವಾರದೊಳಗೆ ಸಂಪೂರ್ಣ ನಿವಾರಣೆಯಾಗಲಿದೆ ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವ ಕೆ.ಹೆಚ್. ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ಅಭಿವೃದ್ಧಿ ಕಾಮಗಾರಿಗಳ ಭೂಮಿಪೂಜೆಯನ್ನು ನೆರವೇರಿಸಿ ಮಾತನಾಡಿದ ಅವರು, ಅಡುಗೆ ಅನಿಲ ಬಳಕೆಯಲ್ಲಿ ಜನರು ಮನೆಗಳಲ್ಲಿ ಮಿತವ್ಯಯ ಮಾಡಬೇಕಿದೆ; ಅಡುಗೆ ಅನಿಲ ಸಿಲಿಂಡರ್ ಪೂರೈಕೆ ಬಗ್ಗೆ ಗೊಂದಲ ಸೃಷ್ಟಿಸಲಾಗುತ್ತಿದೆ; ವಾರದಲ್ಲಿ ಎಲ್ಲಾ ಗೊಂದಲ ಬಗೆಹರಿಯಲಿದೆ. ಕಾಳಸಂತೆಯಲ್ಲಿ ಸಿಲಿಂಡರ್ ಮಾರಾಟ ಮಾಡುವವರ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದರು.

**<><*<><>*><>**

ಎಲ್‌ಪಿಜಿ ಸಿಲಿಂಡರ್ ದುರುಪಯೋಗ ತಡೆಗೆ ಎಸ್ಮಾ ಜಾರಿಗೊಳಿಸಲಾಗಿದೆ. ಕಾಳಸಂತೆಯನ್ನು ತಡೆಗಟ್ಟುವ ಕೆಲಸವನ್ನು ರಾಜ್ಯ ಸರ್ಕಾರ ಮಾಡಬೇಕು ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ಯುದ್ಧದ ಸಂದರ್ಭ, ಜನರು ಸಹಕಾರ ನೀಡಬೇಕಿದೆ. ಆದರೆ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಯುದ್ಧದ ಸಂದರ್ಭದಲ್ಲೂ ರಾಜಕೀಯ ಮಾಡುತ್ತಿದ್ದಾರೆ ಎಂದು ಟೀಕಿಸಿದ್ದಾರೆ.

**<><*<><>*><>**

ಕೊಪ್ಪಳ ಜಿಲ್ಲೆಯಲ್ಲಿ ೧೪ ವರ್ಷದ ಹೆಣ್ಣುಮಕ್ಕಳಿಗೆ ತಪ್ಪದೇ ಎಚ್‌ಪಿವಿ ಲಸಿಕೆಯನ್ನು ಹಾಕಿಸಿ ಗರ್ಭಕಂಠದ ಕ್ಯಾನ್ಸರ್ ಮುಕ್ತ ಜಿಲ್ಲೆಯನ್ನಾಗಿ ಮಾಡಲು ಸಹಕರಿಸಬೇಕೆಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಟಿ. ಲಿಂಗರಾಜು ಹೇಳಿದ್ದಾರೆ. ಜಿಲ್ಲೆಯಲ್ಲಿ ಹಮ್ಮಿಕೊಂಡಿರುವ ಎಚ್‌ಪಿವಿ ಲಸಿಕಾ ಅಭಿಯಾನಕ್ಕೆ ಚಾಲನೆ ನೀಡಿ, ಮಾತನಾಡಿದ ಅವರು, ಜಿಲ್ಲೆಯಲ್ಲಿ ಇಂದಿನಿಂದ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟಲು ಎಚ್‌ಪಿವಿ ಲಸಿಕೆ ನೀಡುವ ಕಾರ್ಯಕ್ರಮವನ್ನು ಆರಂಭಿಸಲಾಗಿದ್ದು, ಇದರ ಉದ್ದೇಶ ಹೆಣ್ಣುಮಕ್ಕಳಲ್ಲಿ ಗರ್ಭಕಂಠದ ಕ್ಯಾನ್ಸರ್ ತಡೆಗಟ್ಟುವುದಾಗಿದೆ ಎಂದರು.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ<>*><>**